# ನಿರ್ದೇಶಕರ ಕಾರ್ಯಾಲಯ, ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆ,
# ಮಾಗಡಿ ರಸ್ತೆ, ಬೆಂಗಳೂರು-560 023.

ಟೆಲಿ ಫ್ಯಾಕ್ಸ : 080 – 23206125/6

E-mail : directorsihfw.bg@gmail.com


ಸಂಖ್ಯೆ: ರಾಆಸಂ/ಎಎನ್ಎಂಟಿಸಿ/04/2016–17 ದಿನಾಂಕ : 23–08–2016.

## ಪ್ರಕಟಣೆ

ವಿಷಯ:– ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆಯ ಅಧೀನದಲ್ಲಿ ಬರುವ 05 (ಐದು) ಸರ್ಕಾರಿ ಜಿ.ಎನ್.ಎಂ ಶಾಲೆಗಳಿಗೆ ಹಾಗೂ 20 (ಇಪ್ಪತ್ತು) ಜಿಲ್ಲೆಗಳಲ್ಲಿ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ತರಬೇತಿಗೆ 2016–17ನೇ ಸಾಲಿನ ಜಿ.ಎನ್.ಎಂ ತರಬೇತಿಗೆ ಮತ್ತು ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ತರಬೇತಿಗೆ ಅರ್ಜಿ ಸಲ್ಲಿಸಲು ನಿಗಧಿಗೊಳಿಸಿದ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

** ** **

ಮೇಲ್ಕಂಡ ವಿಷಯ ಮತ್ತು ಉಲ್ಲೇಖದನ್ವಯ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆಯ ಅಧೀನದಲ್ಲಿ ಬರುವ 05 (ಐದು) ಸರ್ಕಾರಿ ಜಿ.ಎನ್.ಎಂ ಶಾಲೆಗಳಿಗೆ ಹಾಗೂ 20 (ಇಪ್ಪತ್ತು) ಜಿಲ್ಲೆಗಳಲ್ಲಿ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ತರಬೇತಿಗೆ 2016–17ನೇ ಸಾಲಿನ ತರಬೇತಿಗೆ ಅರ್ಜಿಗಳನ್ನು ಆಹ್ವಾನಿಸಿದ್ದು, ಅಭ್ಯರ್ಥಿಗಳ ಹಿತ ದೃಷ್ಠಿಯಿಂದ ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸುವ ಕೊನೆಯ **ದಿನಾಂಕವನ್ನು 24–08–2016 ರಿಂದ 31–08–2016ರ ಸಂಜೆ 5–30ರ ವರೆಗೆ ವಿಸ್ತರಿಸಲಾಗಿದೆ.**

ಕೊನೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೂ ತರಬೇತಿಗೆ ಅರ್ಜಿ ಸಲ್ಲಿಸಲು ಸೂಚಿಸಿರುವ ಸೂಚನೆಗಳು ಮತ್ತು ನಿಬಂಧನೆಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಅರ್ಜಿಗಳನ್ನು www.karhfw.gov.in ವೆಬ್‌ಸೈಟ್‌ನ ಹೋಮ್ ಪೇಜ್‌ನ ಎಡಭಾಗದಲ್ಲಿರುವ (SIHFW) ಪದನಾಮದ ಅಡಿಯಲ್ಲಿ ಡೌನ್‌ಲೋಡ್ ಮಾಡಿಕೊಳ್ಳಬಹುದು ಹಾಗೂ **ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆ, ಮಾಗಡಿ ರಸ್ತೆ, ಬೆಂಗಳೂರು, ಎಲ್ಲಾ ಜಿಲ್ಲೆಗಳ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿ, ಜಿಲ್ಲಾ ಆಸ್ಪತ್ರೆಗಳ ಕಛೇರಿ, ಹಿರಿಯ ಮತ್ತು ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ತರಬೇತಿ ಕೇಂದ್ರ, ಜಿಲ್ಲಾ ಆರೋಗ್ಯ ಮತ್ತು ಕು.ಕ. ತರಬೇತಿ ಕೇಂದ್ರ, ಜಿಲ್ಲಾ ತರಬೇತಿ ಕೇಂದ್ರ, (ಆರೋಗ್ಯ ಇಲಾಖೆ) ಮತ್ತು ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳ ಕಛೇರಿಗಳಲ್ಲಿ ಅರ್ಜಿಗಳನ್ನು ಪಡೆಯಬಹುದಾಗಿದೆ.** ಭರ್ತಿ ಮಾಡಿದ ಅರ್ಜಿಗಳನ್ನು ದ್ವಿಪ್ರತಿಯಲ್ಲಿ **ದಿನಾಂಕ: 31–08–2016ರ ಸಂಜೆ 5–30 ಗಂಟೆ ಒಳಗೆ** ಸಂಬಂಧಪಟ್ಟ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸಲು ಸೂಚಿಸಲಾಗಿದೆ.

ನಿರ್ದೇಶಕರು,
ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆ,
ಬೆಂಗಳೂರು.